ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

24

ಇಲಾಖೆ / ವಿಷಯ : DEPARTMENT / SUBJECT: ______________

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ

ದಿನಾಂಕ : DATE : 20-12-20

---

ನಿರೀಕ್ಷೆ ಕೇಂದ್ರ ಸಚಿವೆ ನಿರ್ಮಲಾ ಭರವಸೆ

# 100 ವರ್ಷಗಳಲ್ಲೇ ಕಂಡು ಕೇಳರಿಯದ ರೀತಿ ಬಜೆಟ್

**ನವದೆಹಲಿ:** ಕೊರೋನಾದಿಂದ ದೇಶದ ಆರ್ಥಿಕತೆ ಸಂಪೂರ್ಣ ನೆಲಕಚ್ಚಿರುವ ಹಂತದಲ್ಲೇ ತಾವು ಈ ಬಾರಿ ಮಂಡಿಸಲಿರುವ ಬಜೆಟ್, ಹಿಂದೆಂದೂ ಕಂಡುಕೇಳರಿಯದ ರೀತಿಯ ಬಜೆಟ್ ಆಗಿರಲಿದೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಭರವಸೆ ನೀಡಿದ್ದಾರೆ.



ಸಿಐಐ ಸಹಭಾಗಿತ್ವ ಶೃಂಗವನ್ನು ಉದ್ದೇಶಿಸಿ ಮಾತನಾಡಿದ ನಿರ್ಮಲಾ ಸೀತಾರಾಮನ್, 'ಕೊರೋನಾ ಬಳಿಕ ಮಂಡನೆ ಆಗುತ್ತಿರುವ ಬಜೆಟ್ ಇದಾಗಿರುವ ಕಾರಣ, ಕಳೆದ 100 ವರ್ಷದಲ್ಲೇ ಯಾರೂ ಮಂಡಿಸಿರದ ರೀತಿಯ ಬಜೆಟ್ ಅನ್ನು ಸಾದರಪಡಿಸಲು ಬಯಸಿದ್ದೇನೆ. ಅದಕ್ಕಾಗಿ ನಿಮ್ಮೆಲ್ಲರಿಂದ ಸಲಹೆ ನಿರೀಕ್ಷಿಸುತ್ತಿದ್ದೇನೆ. ಕೊರೋನಾ ಬಳಿಕದ ಭಾರತದ ಸನ್ನಿವೇಶ ಭಿನ್ನವಾಗಿ ಇರಲಿದೆ. ನಾವು ಜಾಗತಿಕ ಪ್ರಗತಿಯ ಜೊತೆಗೆ ಹೆಜ್ಜೆ ಹಾಕಬೇಕಿದೆ. ಅದೇ ರೀತಿ ಭಾರತದ ಮೇಲೆ ಹಲವು ನಿರೀಕ್ಷೆಗಳಿವೆ. ಅದಕ್ಕೆ ತಕ್ಕಂತೆ ಬಜೆಟ್ ಮಂಡಿಸಬೇಕಿರುವ ಸವಾಲು ನಮ್ಮ ಮುಂದಿದೆ' ಎಂದು ಹೇಳಿದ್ದಾರೆ. ಅವರ ಈ ಭರವಸೆಯಿಂದಾಗಿ ವಿವಿಧ ವಲಯಗಳ ಜೊತೆ ಜನ ಸಾಮಾನ್ಯರ ಬಜೆಟ್ ನಿರೀಕ್ಷೆ ಹೆಚ್ಚಾಗಿದೆ.